# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

### ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 16-03-2021 ಪ್ರಶ್ನೆ ಸಂಖ್ಯೆ : 1131 (1358)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಹೆಚ್.ಎಂ.ರಮೇಶಗೌಡ(ವಿಧಾನಸಭೆಯಿಂದಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 16-03-2021

ಉತ್ತರಿಸುವ ಸಚಿವರು: ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು

ವಿಷಯ : ಪುರಸಭೆ ವ್ಯಾಪ್ತಿಯಲ್ಲಿರುವ ಹಲವಾರು ಬಡಾವಣೆಗಳಿಗೆ ಒಳಚರಂಡಿ ವ್ಯವಸ್ಥೆಗಳ ಕುರಿತು

(ಅ) ರಾಜ್ಯದ ಪುರಸಭೆ ವ್ಯಾಪ್ತಿಯಲ್ಲಿರುವ ಹಲವಾರು ಬಡಾವಣೆಗಳಲ್ಲಿ ಒಳಚರಂಡಿ ವ್ಯವಸ್ಥೆ ಮತ್ತು ರಸ್ತೆಗಳು ಇಲ್ಲದೆ ಸಾರ್ವಜನಿಕರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಯಾವ ಪುರಸಭೆಯ ಬಡಾವಣೆಗಳಲ್ಲಿ ಈ ಸಮಸ್ಯೆಗಳು ಕಂಡುಬಂದಿವೆ ; ಮತ್ತು ಈ ಸಮಸ್ಯೆಯನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಪುರಸಭೆ ವಿವರ ನೀಡುವುದು)

(ಆ) ಕಳೆದ 2 ವರ್ಷಗಳಲ್ಲಿ ಚಿಕ್ಕನಾಯಕನಹಳ್ಳಿ ಪುರಸಭೆ ಅಭಿವೃದ್ಧಿಗಾಗಿ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ; ಈ ಅನುದಾನವನ್ನು ಯಾವ ಯಾವ ಉದ್ದೇಶಗಳಿಗೆ ಬಳಸಲಾಗಿದೆ; (ವಿವರ ನೀಡುವುದು)

(ಇ) ಕಳೆದ 2 ವರ್ಷಗಳಲ್ಲಿ ಚಿಕ್ಕನಾಯಕನಹಳ್ಳಿ ಪುರಸಭೆ ವ್ಯಾಪ್ತಿಯಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು ; ಈ ಕಾಮಗಾರಿಗಳಿಗೆ ತಗಲುವ ಮೊತ್ತವೆಷ್ಟು ; ಕಾಮಗಾರಿಗಳನ್ನು ನಿರ್ವಹಿಸುವ ಗುತ್ತಿಗೆದಾರರು ಯಾರು ? (ಕಾಮಗಾರಿವಾರು ವಿವರ ನೀಡುವುದು)